**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

**ಸಂಖ್ಯೆ**: DPI-CPI0C4-8(OTRS)/40/2022-SEC-EST4/E-895765 **ದಿನಾಂಕ**:14-11-2022

# -:ಸುತ್ತೋಲೆ:-

**ವಿಷಯ:** ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಅನುಮತಿ ನೀಡುವ ಬಗ್ಗೆ

**ಉಲ್ಲೇಖ:**
1. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಸಿ4(6)ಸ.ಪೌ.ಶಾ/ಇತರೆ.ಶೈ.ಪ್ರವಾಸ.ಅನು-51/2019-20 ದಿನಾಂಕ: 13.05.2020.
2. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘ(ರಿ) ಇವರು ಸಲ್ಲಿಸಿರುವ ಮನವಿ.
3. ಅಧ್ಯಕ್ಷರು/ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ) ಬೆಂಗಳೂರು ಇವರ ಪತ್ರ ಸಂಖ್ಯೆ :217:2022-23 ಇವರ ಮನವಿ.
4. ಉಪನಿರ್ದೇಶಕರು ಬೆಂಗಳೂರು ಉತ್ತರ ಜಿಲ್ಲೆ ಹಾಗೂ ಉಪನಿರ್ದೇಶಕರು ಉಡುಪಿ ಇತರರು ದೂರವಾಣಿಯಲ್ಲಿ ಚರ್ಚಿಸಿ ಮನವಿ ಮಾಡಿದಂತೆ

********

ಉಲ್ಲೇಖ (1)ರ ಈ ಕಛೇರಿಯ ಸುತ್ತೋಲೆಯಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗ ಹರಡುವಿಕೆಯಿಂದ ದೇಶಾದ್ಯಂತ ಗಂಭೀರ ಪರಿಸ್ಥಿತಿ ಉಂಟಾಗಿದ್ದ ಪ್ರಯುಕ್ತ ಯಾವುದೇ ಶೈಕ್ಷಣಿಕ ಪ್ರವಾಸ ಹಮ್ಮಿಕೊಳ್ಳಬಾರದೆಂದು ಸೂಚಿಸಿಲಾಗಿರುತ್ತದೆ. ಮುಂದುವರೆದು ಉಲ್ಲೇಖಿತ (2), (3) ಮತ್ತು (4) ರಲ್ಲಿ ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘ(ರಿ), ಅಧ್ಯಕ್ಷರು / ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ), ಬೆಂಗಳೂರು ಹಾಗೂ ಉಪನಿರ್ದೇಶಕರು ಬೆಂಗಳೂರು ಉತ್ತರ ಮತ್ತು ಉಡುಪಿ ಹಾಗೂ ಇತರರು ದೂರವಾಣಿ ಮುಖಾಂತರ ಚರ್ಚಿಸಿ ಮನವಿ ಸಲ್ಲಿಸಿ ಪ್ರಸ್ತಾಪಿಸಿದಂತೆ ಪ್ರಸ್ತುತ 2022-23ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಮಾರ್ಗದರ್ಶನ ಮತ್ತು ಅನುಮತಿ ನೀಡಲು ಕೋರಿರುತ್ತಾರೆ. ಅದರಂತೆ ಪರಿಶೀಲಿಸಲಾಗಿ ಈ ಕೆಳಕಂಡ ಷರತ್ತುಗಳ ಅನ್ವಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮನವಿಗಳನ್ನು ಪರಿಶೀಲಿಸಿ ಅನುಮತಿ ನೀಡಲು ಸೂಚಿಸಿದೆ (ಅನುಮತಿ ನೀಡಿದ ಮಾಹಿತಿಯನ್ನು ಆಯಾ ಜಿಲ್ಲಾ ಉಪನಿರ್ದೇಶಕರಿಗೆ ನೀಡುವುದು)

1. ಪ್ರತಿ ವರ್ಷ ಡಿಸೆಂಬರ್ ಮಾಹೆಯ ಅಂತ್ಯದೊಳಗೆ ಶೈಕ್ಷಣಿಕ ಪ್ರವಾಸ ಕೈಗೊಳ್ಳಬೇಕು, ಯಾವುದೇ ಕಾರಣಕ್ಕೂ ಡಿಸೆಂಬರ್ ಮಾಹೆಯ ನಂತರ ಶೈಕ್ಷಣಿಕ ಪ್ರವಾಸ ಕೈಗೊಳ್ಳದೇ ಶೈಕ್ಷಣಿಕ ಚಟುವಟಿಕೆಗಳಿಗೆ ಪ್ರಾಧಾನ್ಯತೆ ನೀಡುವುದು.
2. ಪೋಷಕರ ಒಪ್ಪಿಗೆ ಪಡೆದ ವಿದ್ಯಾರ್ಥಿಗಳನ್ನು ಮಾತ್ರ ಶೈಕ್ಷಣಿಕ ಪ್ರವಾಸಕ್ಕೆ ಕರೆದೊಯ್ಯುವುದು.
3. ಪ್ರವಾಸ ಶೈಕ್ಷಣಿಕ ಪ್ರವಾಸವಾಗಿರಲು ವಿದ್ಯಾರ್ಥಿಗಳಿಗೆ ಕಲಿಕೆಗೆ ಪೂರಕವಾಗುವ ಸ್ಥಳಗಳನ್ನು ಪ್ರವಾಸಕ್ಕೆ ಆಯ್ಕೆ ಮಾಡಿಕೊಳ್ಳುವುದು.
4. ಪ್ರವಾಸ ಕೈಗೊಳ್ಳುವ ಖಾಸಗಿ ಶಾಲೆಗಳು ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಕಡ್ಡಾಯವಾಗಿ ಶಾಲಾ ಮಾನ್ಯತೆಯನ್ನು ನವೀಕರಿಸಿರಬೇಕು.
5. ಶೈಕ್ಷಣಿಕ ಪ್ರವಾಸವನ್ನು ಶಾಲಾ ದಿನಗಳಂದು ಕೈಗೊಂಡಲ್ಲಿ ಮುಂದಿನ ದಿನಗಳಲ್ಲಿ ಅಂದರೆ ಶನಿವಾರ ಪೂರ್ಣದಿನ/ಭಾನುವಾರ ಶಾಲೆ ನಡೆಸಿ ಕೊರತೆ ಬೀಳುವ ಪಠ್ಯ ಚಟುವಟಿಕೆಗಳನ್ನು ಸರಿದೂಗಿಸುವುದು.
6. ಇಲಾಖೆಯಿಂದ ಪ್ರವಾಸಕ್ಕೆ ಯಾವುದೇ ಸೌಲಭ್ಯವನ್ನು ನೀಡಲಾಗುವುದಿಲ್ಲ.

7. ಪ್ರವಾಸದ ಸಮಯದಲ್ಲಿ ಸಂಭವಿಸುವ ಯಾವುದೇ ಅವಘಡಗಳಿಗೆ ಶಾಲೆಯ ಮುಖ್ಯಸ್ಥರು ನೇರಹೊಣೆಗಾರರಾಗಿರುತ್ತಾರೆ, ಇಲಾಖೆಯು ಜವಾಬ್ದಾರಿಯಾಗಿರುವುದಿಲ್ಲ.
8. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಅಥವಾ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಇಲಾಖಾ ವಾಹನಗಳಲ್ಲೇ ಕಡ್ಡಾಯವಾಗಿ ಶೈಕ್ಷಣಿಕ ಪ್ರವಾಸವನ್ನು ಕೈಗೊಳ್ಳಬೇಕು.
9. ಯಾವುದೇ ಕಾರಣಕ್ಕೂ ಅನಧಿಕೃತವಾಗಿ ಖಾಸಗಿ ಹಾಗೂ ಮಿನಿ ಬಸ್‌ಗಳಲ್ಲಿ ಪ್ರವಾಸವನ್ನು ಕೈಗೊಳ್ಳಬಾರದು.
10. ಮಕ್ಕಳ ಆರೋಗ್ಯ ಮತ್ತು ಸುರಕ್ಷತೆಗೆ ಹೆಚ್ಚು ಆದ್ಯತೆ ನೀಡುವುದು ಹಾಗೂ ಕೋವಿಡ್-19ಗೆ ಸಂಬಂಧಿಸಿದಂತೆ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿಬೇಕು.
11. ಪ್ರವಾಸ ಕೈಗೊಂಡಿರುವ ವಿದ್ಯಾರ್ಥಿನಿಯರ ಮೇಲ್ವಿಚಾರಣೆಯನ್ನು ಪ್ರವಾಸಕ್ಕೆ ನಿಯೋಜಿತ ಮಹಿಳಾ ಶಿಕ್ಷಕರೇ ಕಡ್ಡಾಯವಾಗಿ ನೋಡಿಕೊಳ್ಳತಕ್ಕದ್ದು.

ಈ ಮೇಲ್ಕಂಡ ಎಲ್ಲಾ ಷರತ್ತುಗಳನ್ನು ಪಾಲಿಸಿ ಇಲಾಖಾ ಅನುಮತಿಯನ್ನು ತಪ್ಪದೇ ಪಡೆದಿರಬೇಕು ಹಾಗೂ ಶಿಕ್ಷಕರ ಮತ್ತು ವಿದ್ಯಾರ್ಥಿಗಳ ಮಾಹಿತಿಯನ್ನು ಇಲಾಖೆಗೆ ಕಡ್ಡಾಯವಾಗಿ ನೀಡಿ ಅನುಮೋದನೆ ಪಡೆಯಬೇಕು.

14/11/2022

**ಡಾ॥ ವಿಶಾಲ್. ಆರ್. ಭಾ.ಆ.ಸೇ**

**ಆಯುಕ್ತರು**

**ಗೆ,**

1. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಂಬಂಧಿಸಿದ ಉಪನಿರ್ದೇಶಕರ ಮೂಲಕ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು**:-

1. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಶಿಕ್ಷಣ ಇಲಾಖೆ, ಕಲುಬುರ್ಗಿ ಮತ್ತು ಧಾರವಾಡ ಇವರಿಗೆ ಮಾಹಿತಿಗಾಗಿ.
2. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘ(ರಿ) ಬೆಂಗಳೂರು ಇವರಿಗೆ.
3. ಅಧ್ಯಕ್ಷರು/ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ(ರಿ), ಬೆಂಗಳೂರು ಇವರಿಗೆ.